# TAPAS

reach the unreached

ಆರ್ಥಿಕವಾಗಿ ಹಿಂದುಳಿದ, ಗ್ರಾಮಾಂತರ ಪರಿಸರದ ಅವಕಾಶ ವಂಚಿತ,
ಪ್ರತಿಭಾವಂತ ಮಕ್ಕಳಿಗೆ ಉನ್ನತ ಶಿಕ್ಷಣಕ್ಕೆ ದಾರಿ ಕಲ್ಪಿಸುವ ಮಹದುದ್ದೇಶದ

## ವಿಶೇಷ ಯೋಜನೆ – 'ತಪಸ್'







**A Rashtrotthana Initiative**
**with Complete Academic Support from**

BASE

Be Ahead with Sustained Excellence

'ತಪಸ್' – ಕರ್ನಾಟಕದ ಗ್ರಾಮಾಂತರ ಪ್ರದೇಶಗಳಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಸುಮಾರು 40–50 ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡು ಅವರಿಗೆ **ಉಚಿತವಾಗಿ ಪಿ.ಯು. ಶಿಕ್ಷಣ ಮತ್ತು IIT ಪ್ರವೇಶ ಪರೀಕ್ಷೆಗೆ ತರಬೇತಿಯನ್ನು ನೀಡುತ್ತದೆ.** ಅಲ್ಲದೆ ಉಚಿತ ಊಟ ಮತ್ತು ವಸತಿಯನ್ನು ವಿದ್ಯಾರ್ಥಿ ನಿಲಯದಲ್ಲಿ ಕಲ್ಪಿಸುತ್ತದೆ.

**ಉಚಿತ ವಿದ್ಯಾರ್ಥಿ ನಿಲಯ:** ಕ್ಷೇಮಕರ, ಸ್ವಚ್ಛ ಮತ್ತು ಆರೋಗ್ಯದಾಯಕ ಸಸ್ಯಾಹಾರಿ ಆಹಾರವನ್ನು ಉಚಿತವಾಗಿ ಒದಗಿಸಲಾಗುತ್ತದೆ.

**ಸೌಕರ್ಯ:** ತರಗತಿಗಳು, ಪ್ರಯೋಗಾಲಯಗಳು ಮತ್ತು ಸುಸಜ್ಜಿತ ಗ್ರಂಥಾಲಯ ಉತ್ತಮವಾಗಿ ವಿನ್ಯಾಸಗೊಂಡಿದೆ ಮತ್ತು ಕಠಿಣ ಪರಿಶ್ರಮದಿಂದ ಶ್ರೇಷ್ಠರೆನಿಸಲು ಸ್ಫೂರ್ತಿ ನೀಡುವಂತಿದೆ.

ಆಯ್ಕೆಯಾದ ವಿದ್ಯಾರ್ಥಿಗಳಿಗೆ ಬೆಂಗಳೂರಿನಲ್ಲಿರುವ ರಾಷ್ಟ್ರೋತ್ಥಾನ ಪದವಿಪೂರ್ವ ಕಾಲೇಜಿನಲ್ಲಿ ಪ್ರವೇಶ ಒದಗಿಸಲಾಗುವುದು. ರಾಷ್ಟ್ರೋತ್ಥಾನ ಪದವಿಪೂರ್ವ ಕಾಲೇಜಿನ ಮತ್ತು ಬೇಸ್‌ನ ನುರಿತ ಉಪನ್ಯಾಸಕರುಗಳು ತರಬೇತಿ ನೀಡುತ್ತಾರೆ.

ಈ ವಿದ್ಯಾರ್ಥಿಗಳಿಗೆ IIT ಪ್ರವೇಶ ಪರೀಕ್ಷೆಯ ತಯಾರಿ ನಡೆಸಲು ತರಬೇತಿ ನೀಡುವುದರ ಮೂಲಕ ಬೇಸ್ ಸಹಕರಿಸುತ್ತದೆ.

## ಅರ್ಹತೆಗಳು

- ಪ್ರಸ್ತುತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ./10ನೇ ತರಗತಿಯ ಪರೀಕ್ಷೆಯನ್ನು ಬರೆಯುವವರಾಗಿರಬೇಕು.
- 9ನೇ ತರಗತಿಯ ಪರೀಕ್ಷೆಗಳಲ್ಲಿ ಕನಿಷ್ಠ 80% ಅಂಕಗಳನ್ನು ಪಡೆದಿರಬೇಕು.
- ಪೋಷಕರ ವಾರ್ಷಿಕ ವರಮಾನ ರೂ. 1,50,000 (ಒಂದು ಲಕ್ಷದ ಐವತ್ತು ಸಾವಿರ) ಮೀರಿರಬಾರದು.
- ಆಯ್ಕೆಯಾದರೆ ವಿದ್ಯಾರ್ಥಿಗಳು ವಿದ್ಯಾರ್ಜನೆಗಾಗಿ ಬೆಂಗಳೂರಿಗೆ ತೆರಳಲು ಸಿದ್ಧರಿರಬೇಕು.
- 'ತಪಸ್' ಪ್ರಕಲ್ಪ **ಬಾಲಕ ವಿದ್ಯಾರ್ಥಿಗಳಿಗೆ** ಮಾತ್ರ ಸೀಮಿತ.

## ಆಯ್ಕೆ ವಿಧಾನ

- ಆಯ್ಕೆಯನ್ನು ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಮಾಡಲಾಗುವುದು.
- ಎಲ್ಲಾ ಜಿಲ್ಲಾ ಕೇಂದ್ರಗಳು ಮತ್ತು ಕೆಲವು ನಗರಗಳಲ್ಲಿ ಏಕಕಾಲದಲ್ಲಿ ಲಿಖಿತ ಪರೀಕ್ಷೆ ನಡೆಸಲಾಗುವುದು.
- ಪರೀಕ್ಷೆ ದಿನಾಂಕ : **25 ಡಿಸೆಂಬರ್**
- ಆಯ್ಕೆ ಪರೀಕ್ಷೆಗೆ ಯಾವುದೇ ಶುಲ್ಕವಿರುವುದಿಲ್ಲ.
- ಲಿಖಿತ ಪರೀಕ್ಷೆಯಲ್ಲಿ ಆಯ್ಕೆಯಾದವರಿಗೆ ಮೌಖಿಕ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ನೀಡಲಾಗುವುದು.

## ಅರ್ಜಿ ಸಲ್ಲಿಕೆ ಹೇಗೆ?

- ಅರ್ಜಿಯನ್ನು ತಪಸ್‌ನ ಅಂತರ್ಜಾಲ ತಾಣ, **www.tapasedu.org**ಗೆ ಭೇಟಿ ಕೊಟ್ಟು ಡೌನ್‌ಲೋಡ್ ಮಾಡಿಕೊಂಡು ಅವಶ್ಯಕ ವಿವರಗಳನ್ನು ಭರ್ತಿಮಾಡಿ ಮುಖ್ಯೋಪಾಧ್ಯಾಯರ ಸಹಿ ಪಡೆದು ತಪಸ್ ಪ್ರಕಲ್ಪಕ್ಕೆ ಕಳುಹಿಸುವುದು.
- ಅರ್ಜಿ ಸಲ್ಲಿಸಲು ಕೊನೆ ದಿನಾಂಕ **ಡಿಸೆಂಬರ್ 10** (ಹೆಚ್ಚಿನ ಮಾಹಿತಿಗಳಿಗೆ ನಮ್ಮ ಅಂತರ್ಜಾಲವನ್ನು ತಪ್ಪದೇ ನೋಡುವುದು)

ಅರ್ಜಿ ಸಲ್ಲಿಸಬೇಕಾದ ವಿಳಾಸ:

**ಸಂಯೋಜಕರು, 'ತಪಸ್' ಪ್ರಕಲ್ಪ**
**ರಾಷ್ಟ್ರೋತ್ಥಾನ ಪರಿಷತ್, ಕೇಶವಶಿಲ್ಪ, ಕೆಂಪೇಗೌಡನಗರ, ಬೆಂಗಳೂರು – 560 019**
**ದೂರವಾಣಿ : 080–26612652, 94812 01144**

ಪರೀಕ್ಷಾ ಕೇಂದ್ರಗಳ ಮಾಹಿತಿಯನ್ನು ಡಿಸೆಂಬರ್ ಮೊದಲ ವಾರದಲ್ಲಿ **Website**ನಲ್ಲಿ ಪ್ರಕಟಿಸಲಾಗುವುದು.